ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಆಯವ್ಯಯದಲ್ಲಿ ಘೋಷಿಸಿರುವಂತೆ ಕೈಗಾರಿಕಾ ಪ್ರದೇಶದ ಅಭಿವೃದ್ಧಿ ಬಗ್ಗೆ

ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-

234 (265) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2020-21ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ತುಮಕೂರಿನ ವಸಂತ ನರಸಾಪುರ ಕೈಗಾರಿಕಾ ಪ್ರದೇಶದ 540 ಎಕರೆ ವಿಸ್ತೀರ್ಣದ ಭೂಮಿಯಲ್ಲಿ ಮೆಷಿನ್ ಟೂಲ್ ಪಾರ್ಕ್‌ನ್ನು 425 ಕೋಟಿ ರೂ.ಗಳ ವೆಚ್ಚದಲ್ಲಿ ಸ್ಥಾಪಿಸಲಾಗಿದೆಯೇ ;

(ಆ) ಮೆಷಿನ್ ಟೂಲ್ ಪಾರ್ಕ್ ಸ್ಥಾಪಿತವಾಗಿದ್ದಲ್ಲಿ, ಎಷ್ಟು ಜನ ನಿರುದ್ಯೋಗಿಗಳಿಗೆ ಅವಕಾಶ ಕಲ್ಪಿಸಲಾಗಿದೆ ; ಅದರಲ್ಲಿ ರಾಜ್ಯದ ಎಷ್ಟು ಜನ ನಿರುದ್ಯೋಗಿಗಳಿಗೆ ಅವಕಾಶ ಕಲ್ಪಿಸಲಾಗಿದೆ ;

(ಇ) ಇದಕ್ಕೆ ಪ್ರಸ್ತುತ ತಗುಲಿರುವ ಒಟ್ಟು ಮೊತ್ತವೆಷ್ಟು ;

(ಈ) ಈ ಕಾಮಗಾರಿ ಪ್ರಕ್ರಿಯೆ ಟೆಂಡರ್ ನಿಯಮಾನುಸಾರ ನಡೆದಿದೆಯೇ? (ಈ ಬಗ್ಗೆ ಸಂಪೂರ್ಣ ವರದಿ ನೀಡುವುದು)